**<u>ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ .ದಂ. ನ್ಯಾಯಾಲಯ ಕುಣಿಗಲ್</u>**

# ಸಿ.ಸಿ. 1035/2019

| | | |
|---|---|---|
| ಸಾಕ್ಷಿದಾರರ ಹೆಸರು | : | ರಂಗನಾಥ |
| ತಂದೆಯ ಹೆಸರು | : | ಕೃಷ್ಣಮೂರ್ತಿ |
| ವಯಸ್ಸು | : | 33 ವರ್ಷ |
| ಉದ್ಯೋಗ | : | ಛಾಯಾಗ್ರಾಹಕ |
| ವಾಸ | : | ಬೆಂಗಳೂರು. |

**<u>ಸಾಕ್ಷಿಯನ್ನು ದಿನಾಂಕ:13.02.2026 ರಂದು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.</u>**

**<u>ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ:</u>**

ಸಾಕ್ಷಿಯು ಸ್ಥಳ ಪಂಚನಾಮೆಯನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ **ನಿಪಿ.2** ಎಂದು, ಅದರಲ್ಲಿನ ಸಹಿಯನ್ನು **ನಿ.ಪಿ.2(ಸಿ)** ಎಂದು ಗುರುತಿಸಲಾಯಿತು. ನಾನು ಠಾಣೆಯಲ್ಲಿ ಪೊಲೀಸರ ಕೋರಿಕೆಯ ಮೇರೆಗೆ ಸಹಿ ಮಾಡಿರುತ್ತೇನೆ. ಪಂಚನಾಮೆಯಲ್ಲಿ ಬರೆದಿರುವ ಮಾಹಿತಿಗಳು ನನಗೆ ಗೊತ್ತಿಲ್ಲ. ಪೋಲಿಸರು ಘಟನಾ ಸ್ಥಳವಾದ Karnataka Steel ಅಂಗಡಿ ಬಳಿ ಪಂಚನಾಮೆ ಮಾಡಿ ಠಾಣೆಯಲ್ಲಿ ಸಹಿ ಪಡೆದಿರುತ್ತಾರೆ. ಆಗ ನನ್ನ ಜೊತೆ ಚಾಸಾ.5 ರವರು ಸದರಿ ಅಂಗಡಿ ಮತ್ತು ಠಾಣೆಯ ಬಳಿ ಇದ್ದರು.

**( ಈ ಹಂತರದಲ್ಲಿ ಮಾನ್ಯ ಸ. ಸ. ಅ. ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ವಾಟೀ ಸವಾಲಿಗೆ ನ್ಯಾಯಾಲಯದ ಅನುಮತಿಯನ್ನು ಕೋರಿರುತ್ತಾರೆ. ಅನುಮತಿ ನೀಡಲಾಯಿತು.)**

**<u>ವಾಟೀ ಸವಾಲುಃ ಮಾನ್ಯ ಸ.ಸ. ಅ ರವರಿಂದಃ</u>**

ದಿನಾಂಕ 23.07.2019 ರಂದು ಮಧ್ಯಾಹ್ನ 2.00 ರಿಂದ 3.00 ರವರೆಗೆ ಪೋಲಿಸರು Karnataka steel ಅಂಗಡಿ ಬಳಿ ಘಟನಾ ಸ್ಥಳದ ಪಂಚನಾಮೆ ಮಾಡಿದ್ದರು ಎಂದರೆ ಸರಿ.ಸದರಿ ಪಂಚನಾಮೆಯನ್ನು ಕೆ ಎಸ್ ಆರ್ ಟಿ ಸಿ ಬಸ್ ಚಾಲಕ ಮತ್ತು ಆರೋಪಿತರ ನಡುವೆ ಗಲಾಟೆಯಾದ ವಿಚಾರಕ್ಕೆ ಮಾಡಲಾಗಿತ್ತು ಎಂದರೆ ಸರಿ. ಆ ಸಮಯದಲ್ಲಿ ಚಾಸಾ.1 ರವರು ಸಹ ಇದ್ದರು ಎಂದರೆ ಸರಿ.

**<u>ಪಾಟೀ ಸವಾಲುಃಆರೋಪಿ ಪರ ಶ್ರೀ ಕೆ ಎನ್ ಎ ವಕೀಲರಿಂದಃ</u>**

ಪೊಲೀಸರು ನನಗೆ ಯಾವುದೇ ನೋಟಿಸ್ ನೀಡಿರಲಿಲ್ಲ. ನಿಪಿ.2ನ್ನು ನಾನು ಓದಿರುವುದಿಲ್ಲ. ನಾನು ಐದು ವರ್ಷಗಳಿಂದ ಬೆಂಗಳೂರಿನಲ್ಲಿ ಕೆಲಸ ಮಾಡುತ್ತಿದ್ದೇನೆ. Karnataka steel ಅಂಗಡಿಗೂ ಮತ್ತು ಬಸ್ ನಿಲ್ದಾಣಕ್ಕೂ 2000 ಅಡಿ ಅಂತರವಿದೆ ಎಂದರೆ ಸಾಕ್ಷಿಯು 100 ಮೀಟರ್ ಇರಬಹುದು ಎಂದು ನುಡಿಯುತ್ತಾರೆ. ಚಾಸಾ.1 ರವರು ನನ್ನ ಸಂಬಂಧಿಕರಲ್ಲ. ನಾನು ಯಾವುದೇ ಘಟನೆಯನ್ನು ನೋಡಿರುವುದಿಲ್ಲ ಎಂದರೆ ಸರಿ.

**ಮರುವಿಚಾರಣೆ ಇಲ್ಲ.**

**( ತೆರದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

ಓ. ಹೇ.ಕೇ. ಸರಿ ಇದೆ .

ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ .ದಂ .
ಕುಣಿಗಲ್